# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 780 (949)
ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ವಿಧಾನ ಸಭಾ ಕ್ಷೇತ್ರ)
ಉತ್ತರಿಸುವ ದಿನಾಂಕ : 14.03.2025
ಉತ್ತರಿಸುವ ಸಚಿವರು : ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>2023-24 ಮತ್ತು 2024-25ನೇ ಸಾಲುಗಳಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಬಿಡುಗಡೆ ಮಾಡಿದ ಅನುದಾನ ಎಷ್ಟು; (ವಿವರ ನೀಡುವುದು)</td><td>ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ 2023-24 ಮತ್ತು 2024-25ನೇ ಸಾಲಿನಲ್ಲಿ ಈ ಕೆಳಕಂಡಂತೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ;
<table>
<tr><th>ಕ್ರ.ಸಂ</th><th>ವರ್ಷ</th><th>ಬಿಡುಗಡೆ ಮಾಡಲಾದ ಅನುದಾನ<br>(ರೂ. ಲಕ್ಷಗಳಲ್ಲಿ)</th></tr>
<tr><td>01</td><td>2023-24</td><td>1050.00</td></tr>
<tr><td>02</td><td>2024-25</td><td>1050.00</td></tr>
</table></td></tr>
<tr><td>ಆ)</td><td>ಕರಾವಳಿಯ 170 ಕಿ.ಮೀ ಉದ್ದದ ಸಮುದ್ರ ಬದಿಗಳಲ್ಲಿ ಸರ್ಕಾರ ಕೈಗೊಂಡ ಯೋಜನೆಗಳಾವುವು;</td><td>ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕಾಮಗಾರಿಗಳ ಕ್ರಿಯಾ ಯೋಜನೆಯನ್ನು ಅನುಮೋದಿಸಿದ್ದು, ಅದರಂತೆ ವಿವಿಧ ಅನುಷ್ಠಾನ ಏಜೆನ್ಸಿಗಳ ಮೂಲಕ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br>ಈ ಪ್ರಾಧಿಕಾರಕ್ಕೆ ಕರಾವಳಿಯ ಸಮುದ್ರದ ಬದಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಯಾವುದೇ ನಿರ್ದಿಷ್ಟವಾದ ಯೋಜನೆಗಳನ್ನು ಕೈಗೊಂಡಿರುವುದಿಲ್ಲ.</td></tr>
<tr><td>ಇ)</td><td>ಕರಾವಳಿ ಅಭಿವೃದ್ಧಿ ಪ್ರಾಧಿಕಾರ ಸಲ್ಲಿಸಿದ ಬೇಡಿಕೆ ಏನು; (ವಿವರ ನೀಡುವುದು)</td><td>ಕರಾವಳಿ ಜಿಲ್ಲೆಗಳ ಸಮಗ್ರ ಅಭಿವೃದ್ಧಿಗೊಳಿಸುವ ಹಿತದೃಷ್ಟಿಯಿಂದ ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚು ಅನುದಾನದ ಮತ್ತು ಅದಕ್ಕೆ ಅನುಗುಣವಾಗಿ ಅಧಿಕಾರಿ/ಸಿಬ್ಬಂದಿಗಳನ್ನು ನಿಯೋಜಿಸಲು ಅನುಕೂಲವಾಗುವಂತೆ ಸದರಿ ಪ್ರಾಧಿಕಾರವನ್ನು ಮಂಡಳಿಯಾಗಿ ಮೇಲ್ದರ್ಜೆಗೇರಿಸಲು ಪ್ರಾಧಿಕಾರವು ಬೇಡಿಕೆಯನ್ನು ಸಲ್ಲಿಸಿದೆ. ಸದರಿ ಬೇಡಿಕೆಯನ್ನು ಈಡೇರಿಸಲಾಗಿದೆ. ದಿನಾಂಕ: 01.04.2025 ರಿಂದ ಕರಾವಳಿ ಅಭಿವೃದ್ಧಿ ಮಂಡಳಿಯಾಗಿ ಪರಿವರ್ತಿಸಲಾಗಿದೆ.</td></tr>
</table>

| | | |
|---|---|---|
| ಈ) | ಕರಾವಳಿ ಅಭಿವೃದ್ಧಿ ಪ್ರಾಧಿಕಾರವನ್ನು ನಿರ್ಲಕ್ಷಿಸಿದೆ ಎಂದು ದೂರುಗಳಿದ್ದು ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಎಲ್ಲಾ ಮಂಡಳಿಗಳಿಗೆ ಅನುದಾನವನ್ನು ನಿಗದಿಪಡಿಸುವಂತೆಯೇ ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೂ ಅನುದಾನವನ್ನು ನಿಗದಿಪಡಿಸಲಾಗಿದೆ. |
| ಉ) | ಕರಾವಳಿ ಅಭಿವೃದ್ಧಿ ಪ್ರಾಧಿಕಾರವನ್ನು "ಮಂಡಳಿಯನ್ನಾಗಿ" ಎಂದು ಜಾರಿಗೆ ತರಲಾಗುವುದು; ಯಾರು ಇದರ ಸದಸ್ಯರಾಗಿರುತ್ತಾರೆ? (ವಿವರ ನೀಡುವುದು) | ಕರಾವಳಿ ಅಭಿವೃದ್ಧಿ ಪ್ರಾಧಿಕಾರವು ಕರಾವಳಿ ಅಭಿವೃದ್ಧಿ ಮಂಡಳಿಯಾಗಿ ದಿನಾಂಕ: 01.04.2025 ರಿಂದ ಜಾರಿಗೆ ಬರುತ್ತದೆ.<br>ವಿಧಾನಸಭಾ ಸದಸ್ಯರು ಹಾಗೂ ಕರಾವಳಿ ಅಭಿವೃದ್ಧಿ ಮಂಡಳಿ ವ್ಯಾಪ್ತಿಯಲ್ಲಿ ವಿವಿಧ ಕ್ಷೇತ್ರಗಳಿಂದ ಆಯ್ಕೆಯಾಗುವ ವಿಧಾನ ಪರಿಷತ್ ಸದಸ್ಯರು ಮಂಡಳಿಯ ಸದಸ್ಯರಾಗಿರುತ್ತಾರೆ. |

**ಸಂಖ್ಯೆ: ಪಿಡಿಎಸ್/40/ಪಿಎಂಎಸ್/2025**

(ಡಿ. ಸುಧಾಕರ್)